ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ಶುದ್ಧ ಕುಡಿಯುವ ನೀರಿನ ಘಟಕ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ):-

839 (921) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇದುವರೆಗೂ ರಾಜ್ಯದಲ್ಲಿ ಮಂಜೂರು ಆಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು ; ಕಾರ್ಯಾರಂಭ ಮಾಡಿರುವ ಘಟಕಗಳ ಸಂಖ್ಯೆ ಎಷ್ಟು ; ನಿರ್ಮಾಣ ಹಂತದಲ್ಲಿರುವ ಘಟಕಗಳ ಸಂಖ್ಯೆ ಎಷ್ಟು ;

(ಆ) ಸದರಿ ಘಟಕಗಳಿಗೆ ಬಿಡುಗಡೆಯಾಗಿರುವ ಮತ್ತು ಖರ್ಚಾದ ಹಾಗೂ ಬಾಕಿ ಇರುವ ಅನುದಾನವೆಷ್ಟು ; (ತಾಲ್ಲೂಕುವಾರು, ಗ್ರಾಮ ಪಂಚಾಯಿತಿವಾರು, ಗ್ರಾಮವಾರು ಪ್ರತಿ ಘಟಕದ ವಿವರ ನೀಡುವುದು)

(ಇ) ಈಗಾಗಲೇ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕಗಳಲ್ಲಿ ದುರಸ್ಥಿಗೆ ಎಷ್ಟು ಘಟಕಗಳು ಬಂದಿರುತ್ತವೆ ; ಸಂಪೂರ್ಣ ಹಾಳಾಗಿರುವ ಘಟಕಗಳ ಸಂಖ್ಯೆ ಎಷ್ಟು ; ದುರಸ್ಥಿಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಈ) ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಉತ್ತಮವಾಗಿ ನಿರ್ವಹಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು?